# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 570
2. ಸದಸ್ಯರ ಹೆಸರು : ಶ್ರೀ. ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 16-09-2021.
4. ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೋವಿಡ್ ಹಿನ್ನೆಲೆಯಲ್ಲಿ ನೇಮಕಾತಿಗೆ ಸಂಬಂಧಿಸಿದಂತೆ, ಯಾವ ಯಾವ ಇಲಾಖೆಗಳ ಮೇಲೆ ಆರ್ಥಿಕ ನಿರ್ಬಂಧನೆಯನ್ನು ಹೇರಲಾಗಿದೆ; (ವಿವರ ನೀಡುವುದು) | ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಲು 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ಇಲಾಖೆಗಳ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020ರಲ್ಲಿ ತಡೆ ಹಿಡಿಯಲಾಗಿತ್ತು.<br>ಆದಾಗ್ಯೂ, ಕೋವಿಡ್-19 ತುರ್ತುಸೇವೆಗಳಿಗಾಗಿ ಅಗತ್ಯವಾಗಿರುವ ಹುದ್ದೆಗಳನ್ನು ಮತ್ತು ಮಾನ್ಯ ನ್ಯಾಯಾಲಯಗಳು ಈಗಾಗಲೇ ನಿರ್ದೇಶನ ನೀಡಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ದಿನಾಂಕ: 06.07.2020ರ ಸುತ್ತೋಲೆಯಿಂದ ವಿನಾಯಿತಿ ನೀಡಲಾಗಿತ್ತು.<br>ಸುತ್ತೋಲೆ ಸಂಖ್ಯೆ: ಆಇ 05 ಬಿಇಎಂ 2020, ದಿನಾಂಕ: 12.01.2021 ಹಾಗೂ ಆಇ 03 ಬಿಇಎಂ 2020 (ಭಾಗ), ದಿನಾಂಕ: 14.07.2021ರನ್ವಯ ಅನುಕಂಪ ಆಧಾರದಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಸಹಮತಿ ನೀಡಲಾಗಿದೆ.<br>ವಿವಿಧ ನೇಮಕಾತಿ ಪ್ರಾಧಿಕಾರಗಳಿಂದ ರಾಜ್ಯದ ವಿವಿಧ ಇಲಾಖೆಗಳಲ್ಲಿ ವಿವಿಧ ವೃಂದದ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಜೂನ್ 2021ರ ನಂತರ ನೇಮಕಾತಿ ಆದೇಶ ನೀಡಲು ಸಹಮತಿ ನೀಡಲಾಗಿದೆ. |
| ಆ | ಈ ರೀತಿ ಆರ್ಥಿಕ ನಿರ್ಬಂಧನೆಯನ್ನು ಹೇರಿದ್ದನ್ನು ಹಿಂತೆಗೆದುಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಯಾವ ದಿನಾಂಕದಂದು ಹಾಗೂ ಯಾವ ರೀತಿ ಹಿಂಪಡೆಯಲಾಗಿದೆ; (ಮಾಹಿತಿ ನೀಡುವುದು) | |
| ಇ | ರಾಜ್ಯದ ವಿವಿಧ 34 ಇಲಾಖೆಗಳಲ್ಲಿ ನಿಧನ, ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾಗಿದ್ದ ಹುದ್ದೆಗಳನ್ನು ತುಂಬಿಕೊಳ್ಳಲು ಒಪ್ಪಿಗೆ ನೀಡುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ನಿರ್ಧಾರವೇನು? | ಆರ್ಥಿಕ ಮಿತವ್ಯಯ ಜಾರಿಯಲ್ಲಿದ್ದರೂ ಸಹ ಇಲಾಖೆಗಳಿಂದ ಬರುವ ಪ್ರಸ್ತಾವನೆಗಳನ್ನು ಪ್ರಕರಣವಾರು ಪರಿಶೀಲಿಸಿ, ಅಗತ್ಯತೆಗೆ ಅನುಗುಣವಾಗಿ ಸಾರ್ವಜನಿಕ ಕೆಲಸಕಾರ್ಯಗಳಿಗೆ ತೊಂದರೆಯಾಗದಂತೆ, ಹುದ್ದೆಗಳ ಸೃಜನೆ ಹಾಗೂ ಭರ್ತಿ ಮಾಡಲು ಸರ್ಕಾರದಿಂದ ಸಹಮತಿ ನೀಡಲಾಗುತ್ತಿದೆ. |

ಸಂಖ್ಯೆ: ಆಇ 33 ಬಿಜಿಎಲ್ 2021

(ಬಸವರಾಜ ಬೊಮ್ಮಾಯಿ)

ಮುಖ್ಯಮಂತ್ರಿ